# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** **"ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ"** ಕಾರ್ಯಕ್ರಮ ಮಂಜೂರಾತಿ ಹಾಗೂ ಅನುಷ್ಠಾನದ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಓದಲಾಗಿದೆ:-**
1. 2015-16ನೇ ಸಾಲಿನ ಆಯವ್ಯಯ ಭಾಷಣ.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 516 ಬಿಎಂಎಸ್ 2013, ಬೆಂಗಳೂರು ದಿನಾಂಕ: 24-09.2013
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರ ಏಕಕಡತ ಪ್ರಸ್ತಾವನೆ ಸಂಖ್ಯೆ: ಅಸಂನಿ/ವಿದ್ಯಾಸಿರಿ/ಸಿಆರ್-06/2015-16 ದಿನಾಂಕ: 08-05-2015.

>>>()<<<

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ 2015-16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 237ರಲ್ಲಿ ಮಾನ್ಯ ಮುಖ್ಯಮಂತ್ರಿಗಳು ಹಿಂದುಳಿದ ವರ್ಗಗಳ ಇಲಾಖೆಯಲ್ಲಿರುವ **"ವಿದ್ಯಾಸಿರಿ ಯೋಜನೆ"** ಯನ್ನು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೂ ವಿಸ್ತರಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 516 ಬಿಎಂಎಸ್ 2013, ಬೆಂಗಳೂರು ದಿನಾಂಕ: 24.09.2013 ರಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯದ ಹೆಚ್ಚುವರಿ ಭೋಜನಾ ವೆಚ್ಚ ಕಾರ್ಯಕ್ರಮಕ್ಕೆ ಬದಲಾಗಿ, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಲ್ಲಿ ನಿಗದಿಪಡಿಸಿರುವ ಷರತ್ತುಗಳನ್ನು ಅಳವಡಿಸಿಕೊಂಡು, ಹೊಸದಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರ ವಿದ್ಯಾರ್ಥಿಗಳಿಗೆ, ಈ ಆದೇಶದ ಮಾರ್ಗಸೂಚಿಗಳ ಪ್ರಕಾರ **"ಊಟ ಮತ್ತು ವಸತಿ ಸಹಾಯ ಯೋಜನೆ"** ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ.

ಅಲ್ಪಸಂಖ್ಯಾತರ ಸಮುದಾಯದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡಿದರೂ ಸಹ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳು ಎಲ್ಲಾ ಜಿಲ್ಲೆ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಇರುವುದಿಲ್ಲ. ಹಾಲಿ ಇರುವ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವಷ್ಟು ಸ್ಥಳಾವಕಾಶ, ಶೌಚಾಲಯಗಳು ಹಾಗೂ ಸ್ನಾನ ಗೃಹಗಳು ಇರುವ ಖಾಸಗಿ ಕಟ್ಟಡಗಳು ಲಭ್ಯವಾಗುತ್ತಿಲ್ಲ. ಸಾರ್ವಜನಿಕರು ಖಾಸಗಿ ಕಟ್ಟಡವನ್ನು ವಿದ್ಯಾರ್ಥಿನಿಲಯಗಳಿಗಾಗಿ ಬಾಡಿಗೆಗೆ ನೀಡಲು ಮುಂದೆ ಬರುತ್ತಿಲ್ಲ ಹಾಗೂ ಕೆಲವು ಕಡೆ ಬಾಡಿಗೆಗೆ ಕಟ್ಟಡಗಳು ಲಭ್ಯವಾದರೂ ಸಹ, ಅವುಗಳಲ್ಲಿನ ಕೊಠಡಿಗಳ ಅಳತೆ ತೀರಾ ಕಡಿಮೆ ಇರುವುದರಿಂದ ತೀರಾ ಇಕ್ಕಟ್ಟಿನ ಪರಿಸ್ಥಿತಿಯಲ್ಲಿ ಇವರು ವಾಸವಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಅವರ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದಾಗಿ ನಿರ್ದೇಶಕರು ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ವರದಿ ಮಾಡಿರುತ್ತಾರೆ.

ಆದ್ದರಿಂದ, ಅಲ್ಪಸಂಖ್ಯಾತರ ಸಮುದಾಯದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ, ಮತ್ತು ಅಲ್ಪಸಂಖ್ಯಾತರ ಸಮುದಾಯದ ವಿದ್ಯಾಥಿಗಳಿಗೆ ವಿದ್ಯಾಭ್ಯಾಸ ಮುಂದುವರಿಸಲು ಅನುಕೂಲವಾಗುವಂತೆ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದೆ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ, ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ರೂ. 1,500/- ನಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ. 15,000/-ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಮುಖಾಂತರ ಜಮಾ ಮಾಡಲು 2015-16ನೇ ಸಾಲಿಗೆ ಭೌತಿಕ ಗುರಿ ಅಂದಾಜು 10000 ವಿದ್ಯಾರ್ಥಿಗಳಿಗೆ ನಿಗಧಿಪಡಿಸಿದ್ದು ಅದಕ್ಕೆ ತಗಲುವ ವೆಚ್ಚ ರೂ.15.00 ಕೋಟಿಗಳ (10000 ವಿದ್ಯಾರ್ಥಿಗಳು x ರೂ. 1500/- ಪ್ರತಿ ತಿಂಗಳಿಗೆ x 10 ತಿಂಗಳು = ರೂ. 15 ಕೋಟಿ) ಅನುದಾನ ಮಂಜೂರು ಮಾಡಿ **"ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ**

........2

ವಿದ್ಯಾಸಿರಿ ಯೋಜನೆಗೆ" ಹೊಸ ಲೆಕ್ಕಶೀರ್ಷಿಕೆ ಹಾಗೂ ಮಾರ್ಗಸೂಚಿಯೊಂದಿಗೆ 2015-16ನೇ ಸಾಲಿನಿಂದ ಜಾರಿಗೆ ಬರುವಂತೆ ಆದೇಶ ಹೊರಡಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD 163 MDS 2015 ಬೆಂಗಳೂರು,ದಿನಾಂಕ:21-09-2015**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಹಿಂದುಳಿದ ವರ್ಗಗಳ ಇಲಾಖೆಯಲ್ಲಿರುವ **"ವಿದ್ಯಾಸಿರಿ ಯೋಜನೆ"ಯ ಮಾದರಿಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ** 2015-16ನೇ ಸಾಲಿನಿಂದ ಜಾರಿಗೆ ಬರುವಂತೆ **"ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ"** ಕಾರ್ಯಕ್ರಮ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ. ಈ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ಈ ಕೆಳಕಂಡ ಮಾರ್ಗಸೂಚಿಗಳನ್ನು ಅನುಸರಿಸಲು ಆದೇಶಿಸಿದೆ.

**ಅಲ್ಪಸಂಖ್ಯಾತರ ಸಮುದಾಯದ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ "ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ" ಕಾರ್ಯಕ್ರಮ ಅನುಷ್ಠಾನದ ಮಾರ್ಗಸೂಚಿಗಳು:-**

**(ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಗೆ ಸೇರಿದ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುತ್ತದೆ. (ಸಮಾಜ ಕಲ್ಯಾಣ/ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ)**

**I. ಯೋಜನೆಯ ಉದ್ದೇಶ:**

| | |
|---|---|
| (ಅ) | ಯಾವುದೇ ಇಲಾಖೆಯ ಸರ್ಕಾರಿ/ಅನುದಾನಿತ ವಿದ್ಯಾರ್ಥಿನಿಲಯ/ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದೆ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಅಲ್ಪಸಂಖ್ಯಾತರ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಸಮುದಾಯದ ವಿದ್ಯಾರ್ಥಿಗಳಿಗೆ ಊಟ ಮತ್ತು ವಸತಿ ಸಹಾಯವನ್ನು ಒದಗಿಸುವುದು, ಈ ಯೋಜನೆಯ ಉದ್ದೇಶ. |
| (ಆ) | ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ, ಪ್ರತಿ ತಿಂಗಳಿಗೆ ರೂ, 1500/- ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ. 15,000/- ಸಹಾಯಧನವನ್ನು ಇತರೆ ನಿಬಂಧನೆಗಳಿಗೊಳಪಟ್ಟು ಅವರು ಯಾವುದಾದರೂ ಕೋರ್ ಬ್ಯಾಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ತೆರೆದಿರುವ ಬ್ಯಾಂಕ್ ಖಾತೆಗೆ ಆನ್‌ಲೈನ್ ಮೂಲಕ ಜಮಾ ಮಾಡುವುದು. |
| (ಇ) | ವಿದ್ಯಾರ್ಥಿಗಳು (i) ವಿದ್ಯಾರ್ಥಿನಿಲಯದಲ್ಲಿ ಪ್ರವೇಶ, (ii) "ವಿದ್ಯಾಸಿರಿ"- ಊಟ ಮತ್ತು ವಸತಿ ಸಹಾಯಯೋಜನೆ ಇವುಗಳಲ್ಲಿ ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ. |
| (ಈ) | ಕ್ರಿಶ್ಚಿಯನ್ ಹಾಗೂ ಜೈನ್ ಸಮುದಾಯದ ಅರ್ಹ ವಿದ್ಯಾರ್ಥಿಗಳಿಗೆ ಕ್ರಿಶ್ಚಿಯನ್ ಅಭಿವೃದ್ಧಿ ಮತ್ತು ಜೈನ್ ಸಮುದಾಯದ ವಿದ್ಯಾರ್ಥಿವೇತನ ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾದ ಅನುದಾನದಲ್ಲಿ ಪಾವತಿಸುವುದು. |
| (ಉ) | ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್(ಔಟಿಟುಟಿಜ) ಮೂಲಕ ಅರ್ಜಿ ಸಲ್ಲಿಸಬೇಕು. ಮಂಜೂರಾದ ಮೊತ್ತ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಆನ್‌ಲೈನ್ ಮೂಲಕ ಜಮಾ ಮಾಡುವುದು. |